ಎರಡೂ ಸಮುದಾಯದ 15 ಮಂದಿಗೆ ಅವಕಾಶ

# ಲಾಡ್ಲೆ ಮಶಾಕ್ ದರ್ಗಾದಲ್ಲಿ ಶಿವಲಿಂಗ ಪೂಜೆಗೆ ಅವಕಾಶ

**ಕಲಬುರಗಿ:** ಆಳಂದದ ವಿವಾದಿತ ಲಾಡ್ಲೆ ಮಶಾಕ್ ದರ್ಗಾದಲ್ಲಿನ ರಾಘವ ಚೈತನ್ಯ ಲಿಂಗಕ್ಕೆ ಶಿವರಾತ್ರಿಯಂದು ಹಿಂದುಗಳಿಗೆ ಪೂಜೆ ಸಲ್ಲಿಕೆಗೆ ಹೈಕೋರ್ಟ್



ಅವಕಾಶ ನೀಡಿದೆ. ಶ್ರೀರಾಮಸೇನೆ ಗೌರವಾಧ್ಯಕ್ಷ ಆಂದೋಲಾ ಸಿದ್ಧಲಿಂಗ ಸ್ವಾಮೀಜಿ ಸೇರಿ 15 ಜನರಿಗೆ ಅವಕಾಶ ನೀಡಿದೆ. ಶಿವರಾತ್ರಿ ದಿನ ಪೂಜೆಗೆ ಅವಕಾಶ ಕಲ್ಪಿಸಿಕೊಟ್ಟಿರುವ ಹೈ ಕೋರ್ಟ್ ಮಾ.7ರಂದು ಪೂಜೆಗೆ ತೆರಳುವವರ ಹೆಸರು ಸಲ್ಲಿಕೆ ಮಾಡುವಂತೆ ಸೂಚನೆ ನೀಡಿದೆ. ಗುರುವಾರ ಮಧ್ಯಾಹ್ನದ ವೇಳೆಗೆ ಯಾರ್‍ಯಾರು ಪೂಜೆಗೆ ತೆರಳಲಿದ್ದಾರೆ ಎಂದು ಮಾಹಿತಿ ಸಿಗಲಿದೆ. ಕಳೆದ ವರ್ಷ ಅಂದೋಲಾ ಶ್ರೀ ಸಿದ್ಧಲಿಂಗ ಸ್ವಾಮೀಜಿ ನೇತೃತ್ವದಲ್ಲಿ ಕೇಂದ್ರ ಸಚಿವ ಭಗವಂತ ಖೂಬಾ, ಸುಭಾಷ ಗುತ್ತೇದಾರ್ ಸೇರಿ 15 ಜನರು ಪೂಜೆಗೆ ತೆರಳಿದ್ದರು. ಶಿವರಾತ್ರಿ ದಿನದಂದು ರಾಘವ ಚೈತನ್ಯ ಲಿಂಗಕ್ಕೆ ಪೂಜೆ ಸಲ್ಲಿಕೆಗೆ ಅವಕಾಶ ನೀಡುವಂತೆ ಜಿಲ್ಲಾ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಕೆ ಮಾಡಿದ್ದರು. ಆದರೆ ಮಾ.4ರಂದು ವಿಚಾರಣೆ ನಡೆಸಿದ ನ್ಯಾಯಾಲಯ ಅರ್ಜಿ ತಿರಸ್ಕಾರ ಮಾಡಿತ್ತು. ಅದರ ವಿರುದ್ಧ ಹೈ ಕೋರ್ಟ್ ಮೊರೆ ಹೋಗಿದ್ದರು.

ಮಂಡ್ಯದಲ್ಲಿ ಕೂಗಿದಾಗ ಬಿಜೆಪಿ ಖಂಡಿಸಲಿಲ್ಲ

# ಸಂಸದ ಪ್ರತಾಪ ಸಿಂಹ ಯಾಕೆ ರಾಜೀನಾಮೆ ನೀಡಲಿಲ್ಲ?

**ಹುಬ್ಬಳ್ಳಿ:** ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಬಗ್ಗೆ ಬಿಜೆಪಿಗರು ಸಿಎಂ-ಡಿಸಿಎಂ ರಾಜೀನಾಮೆಗೆ ಒತ್ತಾಯಿಸಿದ್ದಾರೆ. ಲೋಕಸಭೆಯಲ್ಲಿ ಗ್ಯಾಸ್ ಸಿಡಿಸಿದ ಪ್ರಕರಣದಲ್ಲಿ



ಪಾಸ್ ಕೊಡಿಸಿದ ಸಂಸದ ಪ್ರತಾಪ ಸಿಂಹ ಯಾಕೆ ರಾಜೀನಾಮೆ ನೀಡಲಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಪ್ರಶ್ನಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಸೇರಿದ ಜನರಲ್ಲಿ ಯಾರೋ ಕೂಗಿದರೆ ನಾವು ಕೂಗಿದಂತೆ ಆಗುತ್ತಾ? ಮಂಡ್ಯದಲ್ಲಿ ತನ್ನ ಪಕ್ಷದ ಕಾರ್ಯಕರ್ತ ಪಾಕ್ ಪರ ಕೂಗಿದಾಗ ಬಿಜೆಪಿ ಖಂಡಿಸಲಿಲ್ಲ, ಆತನ ವಿರುದ್ಧ ಕ್ರಮ ಕೈಗೊಳ್ಳಲಿಲ್ಲ. ಆದರೆ ನಾವು ಹಾಗಲ್ಲ, ನಾವು ವಿಧಾನಸೌಧದಲ್ಲಿ ನಡೆದ ಘಟನೆ ಖಂಡಿಸಿದ್ದೇವೆ, ಮೂವರನ್ನು ಬಂಧಿಸಲಾಗಿದೆ ಎಂದರು. ಲೋಕಸಭಾ ಚುನಾವಣೆಗೆ ಮಾ.9-10 ರಂದು ಪಕ್ಷದ ಮೊದಲ ಪಟ್ಟಿ ಬಿಡುಗಡೆ ಸಾಧ್ಯತೆ ಇದೆ . ಅಭ್ಯರ್ಥಿಗಳ ಆಯ್ಕೆಯಲ್ಲಿಯಾವ ಗೊಂದಲ ಇಲ್ಲ.ನಮ್ಮ ಪಕ್ಷದಲ್ಲಿ ವಿಧಾನಸಭೆ, ಲೋಕಸಭೆಗೆ ಹಣ ಪಡೆದು ಟಿಕೆಟ್ ನೀಡುವ ಪದ್ಧತಿ ಇಲ್ಲ. ಈ ಬಗ್ಗೆ ಕೆಲವರ ವೈಯಕ್ತಿಕ ಹೇಳಿಕೆಗೆ ಪ್ರತಿಕ್ರಿಯೆ ನೀಡಲಾರೆ ಎಂದು ತಿಳಿಸಿದರು.

ಲೋಕಸಭೆ ಚುನಾವಣೆಯಲ್ಲಿ ತಕ್ಕ ಉತ್ತರ

# ಜನಸ್ನೇಹಿ, ಉದ್ಯಮಸ್ನೇಹಿ ಸರಕಾರವಲ್ಲ ಟಿಪ್ಪು ಸರಕಾರ

**ಕೊಪ್ಪಳ:** ಪಾಕಿಸ್ತಾನ್ ಜಿಂದಾಬಾದ್ ಎಂದು ಘೋಷಣೆ ಹಾಕಿದವರ ರಕ್ಷಣೆ ಮಾಡಲಾಗುತ್ತಿದೆ. ತುಷ್ಟೀಕರಣದ ಪರಾಕಾಷ್ಠೆಯಲ್ಲಿದೆ. ಎ.ರಾಜಾ ಅವರು, ಭಾರತ ಒಂದು



ದೇಶವೇ ಅಲ್ಲ ಎಂದಿದ್ದಾರೆ. ಎಂಪಿ ಚುನಾವಣೆಯಲ್ಲಿ ಜನರು ಇದಕ್ಕೆ ಉತ್ತರ ಕೊಡಬೇಕು ಎಂದು ವಿಧಾನ ಪರಿಷತ್ ಮುಖ್ಯ ಸಚೇತಕ ರವಿಕುಮಾರ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಪಿಎಫ್ಐ, ಕೆಎಫ್‌ಡಿ ಮೇಲಿನ ಕೇಸ್‌ಗಳನ್ನು ಕಾಂಗ್ರೆಸ್ ಸರಕಾರ ವಾಪಾಸ್ ಪಡೆಯಿತು. ಅದಕ್ಕೆ ಇದು ಟಿಪ್ಪು ಸುಲ್ತಾನ್ ಸರಕಾರ ಅಂತ ನಾನು ಹೇಳುತ್ತೇನೆ. ಮಠಗಳಿಗೆ ದುಡ್ಡು ಕೊಟ್ಟಿದ್ದನ್ನು ಕೊಡದ ಸರಕಾರವಿದು. ಕೊಪ್ಪಳ ಗವಿಮಠಕ್ಕೆ ನೀಡಿದ್ದ 10 ಕೋಟಿ ಅನುದಾನದಲ್ಲಿ ಇನ್ನೂ ಏಳೂವರೆ ಕೋಟಿ ಬಿಡುಗಡೆ ಮಾಡಿಲ್ಲ ಎಂದು ಆರೋಪಿಸಿದರು.

ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗಿದೆ. ಜನರಿಗೆ ಸರಿಯಾಗಿ ಕುಡಿಯುವ ನೀರು ಕೊಡಲು ಆಗದ ಸರಕಾರ, ಅಬಕಾರಿ ಇಲಾಖೆಗೆ ಶೇ.6ರಷ್ಟು ಹೆಚ್ಚಿಸುವ ಟಾರ್ಗೆಟ್ ಕೊಡುತ್ತಾರೆ. ಕಾಂಗ್ರೆಸ್ ಸರಕಾರದಲ್ಲಿ ರೈತ ಸ್ನೇಹಿ, ಜನಸ್ನೇಹಿ, ಉದ್ಯಮ ಸ್ನೇಹಿ ಸರಕಾರವಲ್ಲ. ಇದು ಟಿಪ್ಪು ಸುಲ್ತಾನ್ ಸರಕಾರ ಎಂದರು.

ಉಗ್ರ ಕೃತ್ಯಕ್ಕೆ ಯಾವ ಪಕ್ಷವೂ ಬೆಂಬಲಿಸಲ್ಲ

# ಬಿಜೆಪಿ ಆಡಳಿತದ ಕಾಲದಲ್ಲಿ ಇಂಥ ಘಟನೆ ನಡೆದಿಲ್ಲವೇ?

**ಹುಬ್ಬಳ್ಳಿ:** ಪಾಕ್ ಪರ ಘೋಷಣೆ ವಿಚಾರದಲ್ಲಿ ಸಿಎಂ, ಡಿಸಿಎಂ ರಾಜೀನಾಮೆ ನೀಡಬೇಕೆಂದಾದರೆ, ಮಂಡ್ಯದಲ್ಲಿ ಬಿಜೆಪಿ ಕಾರ್ಯಕರ್ತ ಪಾಕ್ ಪರ ಘೋಷಣೆ ಕೂಗಿದ್ದಕ್ಕೆ



ಪ್ರಧಾನಿ ರಾಜೀನಾಮೆ ನೀಡಬೇಕಾ? ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಪ್ರಶ್ನಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ದೇಶದ್ರೋಹ, ಉಗ್ರ ಕೃತ್ಯಗಳಿಗೆ ಯಾವ ಪಕ್ಷವೂ ಬೆಂಬಲ ನೀಡುವುದಿಲ್ಲ. ಚುನಾವಣೆ ಕಾರಣಕ್ಕೆ ಇದೇ ವಿಚಾರಗಳನ್ನು ಬಿಜೆಪಿ ವಿಷಯವಾಗಿಸುತ್ತಿದೆ. ಅಭಿವೃದ್ಧಿ ಬಗ್ಗೆ ಅವರೆಂದೂ ಚರ್ಚಿಸುವುದಿಲ್ಲ ಎಂದರು. ಯಡಿಯೂರಪ್ಪ, ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ ಕಾಲದಲ್ಲಿ ಇಂತಹ ಘಟನೆಗಳು ನಡೆದಿರಲಿಲ್ಲವೇ? ಆಗ ಇವರ ನೈತಿಕತೆ ಎಲ್ಲಿಗೆ ಹೋಗಿತ್ತು? ಕಾಂಗ್ರೆಸ್ 5 ಗ್ಯಾರಂಟಿ, ಅಭಿವೃದ್ಧಿ ಕಾರ್ಯಕ್ರಮಗಳ ಜತೆಗೆ ಬಿಜೆಪಿಯ ಸುಳ್ಳುಗಳನ್ನು ಜನರ ಮುಂದಿಟ್ಟು ಚುನಾವಣೆ ಎದುರಿಸುತ್ತೇವೆ. ಸಂತೋಷ ಲಾಡ್ ಅವರನ್ನು ಬೈಯೋಕೆ ಇಟ್ಟುಕೊಂಡಿದ್ದಾರೆ. ರಾಹುಲ್ ಗಾಂಧಿಯಂತೆ ಮಾತನಾಡುತ್ತಾರೆ ಎಂದು ಲೇವಡಿ ಮಾಡುವ ಬಿಜೆಪಿಗರು, ಅವರ ಬಲಿಷ್ಠ ಪ್ರಧಾನಿ ಬಗ್ಗೆ ಚಕಾರ ಎತ್ತುವುದಿಲ್ಲ ಎಂದು ಕಿಡಿಕಾರಿದರು.

ಕೊಟ್ಟಲಗಿಯಲ್ಲಿ 1,486 ಕೋಟಿ ವೆಚ್ಚದ ಅಮ್ಮಾಜೇಶ್ವರಿ ಏತನೀರಾವರಿಗೆ ಸಿಎಂ ಚಾಲನೆ

# ಬೃಹತ್ ಯೋಜನೆಗಳಿಗೆ ಕೇಂದ್ರ ಅಡ್ಡಗಾಲು

**ಬೆಳಗಾವಿ:** ರಾಜ್ಯ ಸರಕಾರ ನೀರಾವರಿ ಯೋಜನೆಗಳಿಗೆ ಆದ್ಯತೆ ನೀಡಿದೆ. ಆದರೆ, ಬೃಹತ್ ಯೋಜನೆಗಳಿಗೆ ಕೇಂದ್ರವೇ ಅಡ್ಡಗಾಲು ಹಾಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿದರು.

ಅಥಣಿ ತಾಲೂಕಿನ ಕೊಟ್ಟಲಗಿಯಲ್ಲಿ 1,486 ಕೋಟಿ ವೆಚ್ಚದ ಅಮ್ಮಾಜೇಶ್ವರಿ ಏತನೀರಾವರಿಗೆ ಬುಧವಾರ ಚಾಲನೆ ನೀಡಿ ಅವರು ಮಾತನಾಡಿ, ಕೃಷ್ಣಾ ಮೇಲ್ದಂಡೆ ಯೋಜನೆ, ಭದ್ರಾ ಮೇಲ್ದಂಡೆ, ಮೇಕೆದಾಟು ಯೋಜನೆಗಳಿಗೆ ನೋಟಿಫಿಕೇಷನ್ ಹೊರಡಿಸುತ್ತಿಲ್ಲ. ಬಹು ನಿರೀಕ್ಷೆಯ ಮಹದಾಯಿ ಯೋಜನೆಗೆ ಕೇಂದ್ರ ಪರಿಸರ ಇಲಾಖೆಯಿಂದ ಅನುಮತಿ ನೀಡಿಲ್ಲ. ಹೀಗಾದರೆ ರೈತರು ಬದುಕುವುದು ಹೇಗೆ ಎಂದು ಪ್ರಶ್ನಿಸಿದರು.

ಚುನಾವಣೆ ಹೊಸ್ತಿಲಲ್ಲಿ ಮಹದಾಯಿಗೆ ಚಾಲನೆ ದೊರೆಯಿತು ಎಂದು ಬಿಜೆಪಿಯವರು ಸುಳ್ಳು ಹೇಳಿದರು. ಪ್ರಧಾನಿ ಮೋದಿಗೆ ಅಭಿನಂದನೆಗಳ ಸುರಿಮಳೆಗೈದರು. ಆದರೆ ಎಲ್ಲಿ ಕೆಲಸವಾಗಿದೆ? ಇವತ್ತೇ ಅವರು ಕೇಂದ್ರದಿಂದ ಅನುಮತಿ ತಂದರೆ, ನಾಳೆಯೇ ನಾನು ಕಾಮಗಾರಿ ಆರಂಭಿಸುತ್ತೇನೆ. ಈ ಚಾಲೆಂಜ್ ಒಪ್ಪಿಕೊಳ್ಳಲು ಬಿಜೆಪಿ ಸಂಸದರು ಸಿದ್ಧರಿದ್ದೀರಾ ಎಂದು ಸವಾಲು ಹಾಕಿದರು.

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಬಜೆಟ್‌ನಲ್ಲಿ 5,300 ಕೋಟಿ ಘೋಷಣೆ ಮಾಡಿದರು. ಇದೂವರೆಗೆ ಒಂದು ರೂಪಾಯಿ ಕೂಡ ಬಂದಿಲ್ಲ. ಇವರನ್ನು ಗೆಲ್ಲಿಸಿ ಏನು ಪ್ರಯೋಜನವಾಯಿತು. ರಾಜ್ಯದಿಂದ 25 ಸಂಸದರನ್ನು ಆಯ್ಕೆ ಮಾಡಿ ಕಳಿಸಿದ್ದೀರಿ. ಒಬ್ಬರಾದರೂ ಇದರ ಬಗ್ಗೆ ಬಾಯಿ ಬಿಡುತ್ತಾರಾ? ಯಡಿಯೂರಪ್ಪ, ಬೊಮ್ಮಾಯಿ ಸೇರಿದಂತೆ ಯಾರಿಗೂ ಮೋದಿ ಮುಂದೆ ಮಾತನಾಡುವ ಧೈರ್ಯ ಇಲ್ಲ. ಯಾವ ಧೈರ್ಯದ ಮೇಲೆ ಇವರು ಲೋಕಸಭೆ ಚುನಾವಣೆಯಲ್ಲಿ ಮತ ಕೇಳುತ್ತಾರೆ ಎಂದು ದೂರಿದರು.

ಲೋಕಸಭೆ ಚುನಾವಣೆ ಮುಗಿದ ತಕ್ಷಣ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುತ್ತೇವೆ ಎಂದು ಬಿಜೆಪಿ ಅಪಪ್ರಚಾರ ಮಾಡುತ್ತಿದೆ. ಮುಂದಿನ ವರ್ಷದ ಗ್ಯಾರಂಟಿಗೆ 56 ಸಾವಿರ ಕೋಟಿ ಮೀಸಲಿಟ್ಟಿದ್ದೇವೆ. ಅಭಿವೃದ್ಧಿಗೂ 65 ಸಾವಿರ ಕೋಟಿ ಇಟ್ಟಿದ್ದೇವೆ. ಯಾವುದೇ ಕಾರಣಕ್ಕೂ ಗ್ಯಾರಂಟಿಯೂ ನಿಲ್ಲುವುದಿಲ್ಲ, ಅಭಿವೃದ್ಧಿಯೂ ನಿಲ್ಲುವುದಿಲ್ಲ ಎಂದರು.



ಅಥಣಿ ತಾಲೂಕಿನ ಕೊಟ್ಟಲಗಿಯಲಿ ಬುಧವಾರ ನಡೆದ ಅಮ್ಮಾಜೇಶ್ವರಿ ಏತನೀರಾವರಿ ಶಂಕುಸ್ಥಾಪನೆ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಯಕರ್ತರ ಕಡೆ ಕೈ ಬೀಸಿದರು.

> ಮೋದಿ ಮಾತಿಗೆ ಕೋಲೆಬಸವನಂತೆ ತಲೆ ಅಲ್ಲಾಡಿಸುವವರನ್ನು ಲೋಕಸಭೆಗೆ ಕಳಿಸಬೇಡಿ. ರಾಜ್ಯದ ಪರವಾಗಿ ಧ್ವನಿ ಎತ್ತುವ ನಮ್ಮ ಅಭ್ಯರ್ಥಿ ಗೆಲ್ಲಿಸಿ. ಶಾಸಕ ಲಕ್ಷ್ಮಣ ಸವದಿ ಮುಂದಿನ ದಿನಗಳಲ್ಲಿ ಸಚಿವ ಸ್ಥಾನ ಸಿಗಲಿದೆ. ಒಳ್ಳೆಯ ಕೆಲಸಗಾರ. ಅವರಿಗೆ ಪಕ್ಷದಲ್ಲಿ ಭವಿಷ್ಯವಿದೆ.
>
> ಸಿದ್ದರಾಮಯ್ಯ, ಮುಖ್ಯಮಂತ್ರಿ

> ಎಪಿಎಂಸಿ ಕಾಯಿದೆ ವಾಪಸ್ ಪಡೆಯುವುದಾಗಿ ಚುನಾವಣೆ ವೇಳೆ ಭರವಸೆ ನೀಡಿದಂತೆ ಪರಿಷ್ಕೃತ ಕಾಯಿದೆಗೆ ಅನುಮೋದನೆ ಪಡೆಯಲಾಗಿದೆ. ರೈತರಿಗೆ ಆರ್ಥಿಕ ಶಕ್ತಿ ತುಂಬುವ ಕೆಲಸವನ್ನು ಸರಕಾರ ಮಾಡುತ್ತಿದೆ. ಐದು ಗ್ಯಾರಂಟಿ ಬಲಪಡಿಸಲು ಕೈಗೆ ಶಕ್ತಿ ತುಂಬಬೇಕು . ಕುಡಿಯುವ ನೀರಿನ ಯೋಜನೆಯಾಗಿರುವ ಕಳಸಾ-ಬಂಡೂರಿ ಸೇರಿದಂತೆ ರಾಜ್ಯದ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಸರಕಾರ ಬದ್ಧವಿದೆ. ಜನರ ಸಹಕಾರ ಇದ್ದರೆ ಇದು ಸಾಧ್ಯವಾಗಲಿದೆ.
>
> -ಡಿ.ಕೆ.ಶಿವಕುಮಾರ್, ಉಪ ಮುಖ್ಯಮಂತ್ರಿ

### ಬೆಂಬಲ ಬೆಲೆ ಕಾಯಿದೆ ಜಾರಿ

ದೇಶದ ಆಹಾರ ಸ್ವಾವಲಂಬನೆಗೆ ಶ್ರಮಿಸುತ್ತಿರುವ ರೈತರಿಗೆ ಬೆಂಬಲ ಬೆಲೆ ಕೊಡುವುದು ಸರಕಾರದ ಕರ್ತವ್ಯ. ದೇಶಾದ್ಯಂತ ಕನಿಷ್ಠ ಬೆಂಬಲ ಬೆಲೆ ಕಾಯಿದೆ ಜಾರಿಗೆ ರೈತರು ಹೋರಾಟ ನಡೆಸುತ್ತಿದ್ದಾರೆ. ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಎಂಎಸ್‌ಪಿ ಕಾಯಿದೆ ಜಾರಿಗೆ ತರಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಕೃಷಿ ಇಲಾಖೆಯ ಆಶ್ರಯದಲ್ಲಿ ಸುವರ್ಣ ವಿಧಾನಸೌಧದ ಆವರಣದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಬೆಳಗಾವಿ ವಿಭಾಗದ ಫಲಾನುಭವಿ ರೈತರಿಗೆ ವಿವಿಧ ಕೃಷಿ ಸಲಕರಣೆಗಳು ಮತ್ತು ಸೌಲಭ್ಯಗಳನ್ನು ವಿತರಿಸಿ ಅವರು ಮಾತನಾಡಿ, ರಾಜ್ಯದಲ್ಲಿ 223 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಇದರಲ್ಲಿ 196 ತಾಲೂಕುಗಳು ತೀವ್ರ ಬರಪೀಡಿತವಾಗಿವೆ. ಒಟ್ಟಾರೆ 18,171 ಕೋಟಿ ಬೆಳೆಹಾನಿಯಾಗಿದ್ದು, ಪರಿಹಾರ ಒದಗಿಸುವಂತೆ ಕೋರಿ ಕೇಂದ್ರ ಸರಕಾರಕ್ಕೆ ಹಲವಾರು ಬಾರಿ ಮನವಿ ಸಲ್ಲಿಸಿದರೂ ಯಾವುದೇ ರೀತಿಯ ನೆರವು ನೀಡಿಲ್ಲ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

# ಕೆಎಫ್‌ಡಿಯಿಂದ ಮೃತಪಟ್ಟರೆ ಅರಣ್ಯ ಇಲಾಖೆಯಿಂದ ಪರಿಹಾರ

**ಶಿರಸಿ:** ಮಂಗನ ಕಾಯಿಲೆಯಿಂದ ಮರಣ ಹೊಂದಿದವರಿಗೆ ಅರಣ್ಯ ಇಲಾಖೆಯಿಂದ



ಪರಿಹಾರ ನೀಡುವ ಕುರಿತು ಚರ್ಚೆ ನಡೆಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಮಂಗನ ಕಾಯಿಲೆಯಿಂದ ಯಾರೂ ಸಾಯಬಾರದು. ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಲಾಗುವುದು. ರೋಗ ನಿವಾರಣೆ ಜತೆ ಪರಿಹಾರ ಕಾರ್ಯವೂ ಆಗಬೇಕು. ಹೀಗಾಗಿ ಕಾಯಿಲೆಗೆ ಔಷಧ ಕಂಡುಹಿಡಿಯಲು ಕೂಡ ಕ್ರಮವಹಿಸಲಾಗುವುದು. ಜತೆ, ಅರಣ್ಯ ಇಲಾಖೆ ಮೂಲಕ ಪರಿಹಾರ ನೀಡಲು, ಕಾಯಿಲೆಗೆ ತುತ್ತಾಗಿ ಮೃತಪಟ್ಟವರ ವರದಿ ತರಿಸಿಕೊಂಡು ಎಲ್ಲರಿಗೂ ಮೆಡಿಕಲ್ ಬಿಲ್ ಮೊತ್ತ ನೀಡಲು ಕ್ರಮ ವಹಿಸಲಾಗುವುದು ಎಂದರು.

ಖಾಸಗಿ ಸಂಸ್ಥೆಗಳು ನೀಡುವ ಎಫ್‌ಎಸ್ಎಲ್ ವರದಿಯನ್ನು ಸರಕಾರ ಒಪ್ಪುವುದಿಲ್ಲ, ಪೊಲೀಸ್ ಇಲಾಖೆ ನೀಡುವ ವರದಿಯೇ ಅಧಿಕೃತ. ಆ ವರದಿ ಆಧರಿಸಿ ತನಿಖೆ ನಡೆಸುತ್ತೇವೆ ಎಂದರು.

ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಸಚಿವರು ಮತ್ತು ಶಾಸಕರ ಅಧ್ಯಕ್ಷತೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಭೆಗಳನ್ನು ನಡೆಸುವಂತೆ ಸೂಚನೆ ನೀಡಲಾಗಿದೆ. ಪ್ರತಿ ವಾರಕ್ಕೊಮ್ಮೆ ಪಿಡಿಒಗಳು ಮತ್ತು ವಿಎಗಳ ಸಭೆ ನಡೆಸುವಂತೆ ಸೂಚನೆ ನೀಡಲಾಗಿದೆ. ಈ ಕಾರ್ಯದಲ್ಲಿ ನಿರ್ಲಕ್ಷ್ಯ ವಹಿಸುವ ಡಿಸಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

> ಕುಡಿಯುವ ನೀರಿನ ಸಮಸ್ಯೆಗೆ ಆದ್ಯತೆಯಲ್ಲಿ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗಿದೆ. ಜಿಲ್ಲಾಧಿಕಾರಿಗಳ ಖಾತೆಯಲ್ಲಿ 854 ಕೋಟಿ ಪಿಡಿ ಖಾತೆಯಲ್ಲಿದೆ. ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಉಚಿತ ಸಹಾಯವಾಣಿ ಆರಂಭಿಸಲಾಗುವುದು.
>
> -ಸಿದ್ದರಾಮಯ್ಯ ಮುಖ್ಯಮಂತ್ರಿ

# ಬಡಬಡಿಸೋದೇ ಕಾಂಗ್ರೆಸ್ ಕೆಲಸ

**ಬೆಳಗಾವಿ:** ರಾಹುಲ್ ಗಾಂಧಿ ದೇಶದ ಪ್ರತಿ ಮೂಲೆಗೂ ಹೋಗಿ ಬಟಾಟೆಯಿಂದ ಬಂಗಾರ ತೆಗೆಯೋದು ಹೇಗೆ ಅಂತ ಹೇಳ್ತಿದ್ದಾರೆ. ಇಂತಹ ಮಾತುಗಳಿಗೆ ಕಿವಿ, ಸಮಯ ಕೊಡಬಾರದು ಎಂದು ಸಂಸದ ಅನಂತಕುಮಾರ್ ಹೆಗಡೆ ಟೀಕಿಸಿದರು.


ಖಾನಾಪುರ ತಾಲೂಕಿನ ನಂದಗಡದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿ, ಕಾಂಗ್ರೆಸ್‌ನವರು ಬಡಬಡಿಸುತ್ತಿದ್ದಾರೆ, ಹಿಂದೆ ಮುಂದೆ ಬಡಬಡಿಸೋದೆ ಕಾಂಗ್ರೆಸ್ ಕೆಲಸ ಎಂದರು.

ದೇಶದ ಪ್ರತಿ ಮನೆಗೆ ಪ್ರಧಾನಿ ನರೇಂದ್ರ ಮೋದಿ ಯೋಜನೆಗಳು ತಲುಪಿವೆ. ನಮಗೆ ಗೊತ್ತಿಲ್ಲ, 350 ಯೋಜನೆಗಳನ್ನು ಕೇಂದ್ರ ಸರಕಾರ ನೀಡಿದೆ. ಓದಿ ಹೇಳಲು ಆಗದಷ್ಟು ಯೋಜನೆಗಳನ್ನು ನರೇಂದ್ರ ಮೋದಿ ಸರಕಾರ ನೀಡಿದೆ. ಮಕ್ಕಳಿಗೆ, ವೃದ್ಧರಿಗೆ, ರೈತರು, ಉದ್ಯಮಿಗಳಿಗೆಲ್ಲ ಯೋಜನೆ ಜಾರಿಯಾಗಿವೆ. ಪ್ರತಿಕ್ಷೇತ್ರದಲ್ಲೂ ಮೋದಿ ಸರಕಾರದ ಕೊಡುಗೆ ಇದೆ ಎಂದರು.

## ಸಮಾಚಾರ ಸಣ್ಣದಲ್ಲ


### ಲೋಕಾಯುಕ್ತ ಬಲೆಗೆ ಕಂದಾಯ ನಿರೀಕ್ಷಕ

**ಶಿವಮೊಗ್ಗ:** ಇ- ಸ್ವತ್ತು ಮಾಡಿಸಲು 40 ಸಾವಿರ ರು. ಲಂಚ ಪಡೆಯುವಾಗ ಸೊರಬ ಪುರಸಭೆಯ



ಕಂದಾಯ ನಿರೀಕ್ಷಕ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಸೊರಬ ಪುರಸಭೆಯ ಕಂದಾಯ ನಿರೀಕ್ಷಕ ವಿನಾಯಕ ಅವರು ದೂರುದಾರೆ ಪ್ರತಿಭಾ ಅವರಿಂದ ಲಂಚದ ರೂಪದಲ್ಲಿ ಹಣ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಕೈಗೆ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ. ಮೂಲತಃ ಹೊನ್ನಾವರದ ನಿವಾಸಿಯಾಗಿರುವ ಪ್ರತಿಭಾ ಅವರಿಗೆ ಹಳೇ ಸೊರಬ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ 450X 250 ಅಡಿಯ ಖಾಲಿ ಜಾಗ ಹಾಗೂ ಅದಕ್ಕೆ ಹೊಂದಿಕೊಂಡಂತೆ ಜಾಗ ಇದೆ. ಈ ಜಾಗವು ಸೊರಬ ಪುರಸಭಾ ವ್ಯಾಪ್ತಿಗೆ ಬರುವುದರಿಂದ ಪ್ರತಿಭಾ ಅವರು ತಮ್ಮ ಖಾಲಿ ಜಾಗಕ್ಕೆ ಇ-ಸ್ವತ್ತು ಮಾಡಿಸಲು ಹೋಗಿದ್ದರು. ಈ ವೇಳೆ ಕಂದಾಯ ನಿರೀಕ್ಷಕ ವಿನಾಯಕ್ ಅವರು 50 ಸಾವಿರ ರು. ಲಂಚದ ಬೇಡಿಕೆ ಇಟ್ಟಿದ್ದರು.

### ನಮ್ಮತ್ತೆ ಬೇಗ ಸಾಯ್ಲಿ ಸೊಸೆಯ ವಿಚಿತ್ರ ಹರಕೆ



**ಕಲಬುರಗಿ:** ಅತ್ತೆ ಸೊಸೆಯರ ಮಧ್ಯೆ ಸಂಸಾರದ ಜಂಜಾಟ ಸರ್ವೆ ಸಾಮಾನ್ಯ. ಆದರೆ, ಕಲಬುರಗಿ ಜಿಲ್ಲೆಯಲ್ಲಿ ಸೊಸೆಯೊಬ್ಬಳು ನೋಟಿನ ಮೇಲೆ 'ನಮ್ಮ ಅತ್ತೆ ಬೇಗ ಸಾಯಿಬೇಕು ಸ್ವಾಮಿ' ಎಂದು ಬರೆದು ದೇವರ ಹುಂಡಿಗೆ ಕಾಣಿಕೆ ಹಾಕುವ ಮೂಲಕ ಮನೆಯ ಜಗಳವನ್ನು ದೇವರ ಸನ್ನಿಧಿಗೆ ತಂದಿದ್ದಾಳೆ. ಅಫಜಲಪುರ ತಾಲೂಕಿನ ಗಣಗಾಪುರದ ದತ್ತಾತ್ರೆ ಯ ದೇವಸ್ಥಾನದ ಹುಂಡಿಗೆ 50 ರು. ನೋಟಿನ ಮೇಲೆ ಸೊಸೆಯೇ ಅತ್ತೆಯ ಸಾವನ್ನು ಬಯಸಿ, ದೇವರಿಗೆ ಹರಿಕೆ ಹೊತ್ತು ಕಾಣಿಕೆ ಅರ್ಪಣೆ ಮಾಡಿದ್ದಾಳೆ. ಇತ್ತೀಚೆಗೆ ದತ್ತನ ಹುಂಡಿ ಎಣಿಕೆ ಕಾರ್ಯ ನಡೆದಿತ್ತು. ಆ ವೇಳೆ ಸೊಸೆಯ ವಿಚಿತ್ರ ಹರಕೆಯ 50 ರು. ನೋಟು ಪತ್ತೆಯಾಗಿದೆ.

### ಮಾಜಿ ಮೇಯರ್ ಪುತ್ರನಿಂದ ಹಲ್ಲೆ: ಸೆರೆ

**ಬಳ್ಳಾರಿ:** ಹುಟ್ಟುಹಬ್ಬದ ಪಾರ್ಟಿ ವಿಚಾರವಾಗಿ ಬಳ್ಳಾರಿಯ ಮಾಜಿ ಮೇಯರ್ ನಾಗಮ್ಮ ಅವರ ಪುತ್ರ ರಘು, ಯುವಕನೊಬ್ಬನ ಮೇಲೆ ಮಾರಕಾಸ್ತ್ರಗಳಿಂದ ತೀವ್ರ ಹಲ್ಲೆ ನಡೆಸಿದ್ದಾನೆ. ಈ ಸಂಬಂಧ ಗಾಂಧಿನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಏಳು ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. ಘಟನೆಯಲ್ಲಿ ತಿಪ್ಪೇಸ್ವಾಮಿ (38) ಎಂಬುವವರು ತೀವ್ರವಾಗಿ ಗಾಯಗೊಂಡಿದ್ದು, ಕೋಮಾಕ್ಕೆ ಜಾರಿದ್ದಾರೆ. ಅವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ರಘು, ಅನಿಲ್ ಕುಮಾರ್, ಮುತ್ತು, ಭಾಸ್ಕರ್, ರಾಜಶೇಖರ್, ಬಾಲು, ರಾಜು ಎಂಬುವವರ ಬಂಧನವಾಗಿದೆ. ಇನ್ನು ನಾಲ್ಕು ಜನರು ತಲೆಮರೆಸಿಕೊಂಡಿದ್ದು, ಪೊಲೀಸರು ಹುಡುಕಾಟ ನಡೆಸಿದ್ದಾರೆ.

### ಕ್ಯಾಂಟರ್ ಪಲ್ಟಿ: 3 ಸಾವು

**ಗದಗ:** ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಹಳ್ಳಿಗುಡಿ ಗ್ರಾಮದ ಬಳಿ ಬುಧವಾರ ಕ್ಯಾಂಟರ್ ವಾಹನವೊಂದು ಪಲ್ಟಿಯಾಗಿದ್ದು, ಭೀಕರ ಅಪಘಾತದಲ್ಲಿ ಮೂವರು ಮೃತಪಟ್ಟಿದ್ದು, ಮೂವರು ಗಾಯಗೊಂಡಿದ್ದಾರೆ. ಮೃತರನ್ನು ನವೀನ್ ಕುಂಬಾರ್(23), ನಾಗಪ್ಪ ಕಾಳಿ (23), ಗಂಗಪ್ಪ ಅಕ್ಕಿ(22) ಎಂದು ಗುರುತಿಸಲಾಗಿದೆ. ಮೃತರು ಧಾರವಾಡ ಜಿಲ್ಲೆಯ ಕುಂದಗೋಳ ತಾಲೂಕಿನ ಹಿರೇನರ್ತಿ ಗ್ರಾಮದವರು ಎಂದು ತಿಳಿದುಬಂದಿದೆ.

{ಕೆ.ಎಸ್.ಈಶ್ವರಪ್ಪ} ಮಾಜಿ ಸಚಿವ

**ಪಾಕ್ ಪರ ಘೋಷಣೆ ಕೂಗಿದ್ದರ ವಿರುದ್ಧ ಒಬ್ಬ ಕಾಂಗ್ರೆಸ್ ನಾಯಕ ಸಹ ಖಂಡನೆ ಮಾಡಲಿಲ್ಲ. ಪಾಕ್ ಪರ ಘೋಷಣೆ ಕೂಗಿಲ್ಲ ಎಂದು ಹತ್ತು ಬಾರಿ ಕಾಂಗ್ರೆಸ್ ನಾಯಕರು ಹೇಳಿದ್ದರು. ಇದು ಕಾಂಗ್ರೆಸ್ ನಾಯಕರ ಮನಸ್ಥಿತಿ. ಇಂಥ ಮಂತ್ರಿಗಳಿರು ವುದು ನಮ್ಮ ದೌರ್ಭಾಗ್ಯ.**



13ರಿಂದ ಪರೀಕ್ಷೆ ಬರೆಯಬೇಕಿದ್ದ ವಿದ್ಯಾರ್ಥಿಗಳು ಫುಲ್ ಖುಷ್

# 5-11ನೇ ತರಗತಿ ಬೋರ್ಡ್ ಪರೀಕ್ಷೆ ರದ್ದು

**ಬೆಂಗಳೂರು:** ರಾಜ್ಯ ಪಠ್ಯಕ್ರಮವಿರುವ ಶಾಲೆಗಳ 5, 8, 9 ಹಾಗೂ 11ನೇ ತರಗತಿಗೆ ರಾಜ್ಯಮಟ್ಟದ ಬೋರ್ಡ್ ಪರೀಕ್ಷೆ ನಡೆಸುವ ಸಂಬಂಧ ರಾಜ್ಯ ಸರಕಾರ ಹೊರಡಿಸಿದ್ದ



ಸುತ್ತೋಲೆಯನ್ನು ಹೈಕೋರ್ಟ್ ರದ್ದುಪಡಿಸಿ ಆದೇಶಿಸಿದೆ.

ರಾಜ್ಯ ಪಠ್ಯಕ್ರಮದ ಶಾಲೆಗಳ ಈ ನಾಲ್ಕು ತರಗತಿಗಳ ವಿದ್ಯಾರ್ಥಿಗಳಿಗೆ ಶಾಲಾ ಮಟ್ಟದ ಮೌಲ್ಯಮಾಪನದ ಬದಲಾಗಿ ರಾಜ್ಯ ಮಟ್ಟದ ಮಂಡಳಿ (ಬೋರ್ಡ್) ಪರೀಕ್ಷೆ ನಡೆಸಲು ತೀರ್ಮಾನಿಸಿ ಈ ಹಿಂದೆ ಸುತ್ತೋಲೆ ಹೊರಡಿಸಿತ್ತು. ಇದನ್ನು ಪ್ರಶ್ನಿಸಿ ಅನುದಾನರಹಿತ ಖಾಸಗಿ ಶಾಲೆಗಳ ಒಕ್ಕೂಟ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾ. ರವಿ ಹೊಸಮನಿ ಅವರಿದ್ದ ನ್ಯಾಯಪೀಠ ಬುಧವಾರ ತೀರ್ಪು ಪ್ರಕಟಿಸಿತು.ಹೈಕೋರ್ಟ್‌ನ ಈ ಆದೇಶದಿಂದ ಇದೇ ಮಾರ್ಚ್ 13 ರಿಂದ 19ರವರೆಗೂ ನಿಗದಿಯಾಗಿದ್ದ ಬೋರ್ಡ್ ಪರೀಕ್ಷೆಗಳು ರದ್ದಾದಂತಾಗಿದೆ.

ರಾಜ್ಯ ಶಿಕ್ಷಣ ಇಲಾಖೆ ಶಿಕ್ಷಣ ಕಾಯಿದೆಯಲ್ಲಿ 2023ರ ಅ. 6 ಮತ್ತು 9ರಂದು ಎರಡು ಸುತ್ತೋಲೆ ಗಳನ್ನು ಹೊರಡಿಸಿ, ಬೋರ್ಡ್ ಮಟ್ಟದ ಪರೀಕ್ಷೆ ನಡೆಸುವುದಕ್ಕೆ ತೀರ್ಮಾನಿಸಿತ್ತು. ಇದನ್ನು ಅರ್ಜಿ ದಾರರ ಸಂಘ ವಿರೋಧಿಸಿ, ಕಲಿಕಾ ಚೇರಿಕೆ ಪಠ್ಯಕ್ರಮ ಖಾಸಗಿಯವರಿಗೆ ಅನ್ವಯವಲ್ಲ ಎಂದು ವಾದಿಸಿತ್ತು. ಆದರೆ, ಪ್ರಶ್ನೆಪತ್ರಿಕೆಯಲ್ಲಿ ಪಠ್ಯಕ್ರಮದಿಂದ ಹೊರತಾದ ಪ್ರಶ್ನೆಗಳಿಲ್ಲ ಎಮದು ಸರಕಾರಿ ವಕೀಲರು ವಾದಿಸಿದರು. ವಾದ-ಪ್ರತಿವಾದ ಆಲಿಸಿದ ನ್ಯಾಯ ಪೀಠ, ಪ್ರಸಕ್ತ ವರ್ಷಕ್ಕೆ ಬೋರ್ಡ್ ಪರೀಕ್ಷೆಯನ್ನು ರದ್ದುಪಡಿಸಿ ಆದೇಶ ಹೊರಡಿಸಿದೆ.

### ಶಾಲೆಗಳ ವಾದವೇನು?

- ಸುತ್ತೋಲೆ ಕೇವಲ ಸರಕಾರಿ ಶಾಲೆಗಳಿಗೆ ಅನ್ವಯವಾಗುವಂತಿದೆ.
- ಕಲಿಕಾ ಚೇತರಿಕೆ ಪಠ್ಯಕ್ರಮ ಖಾಸಗಿಯವರಿಗಿಂತ ಪೂರ್ಣ ಭಿನ್ನ.
- ಕಲಿಕಾ ಚೇತರಿಕೆ ಪ್ರಶ್ನೆಗಳಿಗೆ ಖಾಸಗಿ ಮಕ್ಕಳು ಉತ್ತರಿಸಲು ಕಷ್ಟ.
- ಎಲ್ಲ ಮಕ್ಕಳಿಗೂ ಅನ್ವಯವಾಗುವಂತೆ ಬೋರ್ಡ್ ಮಟ್ಟದ ಪರೀಕ್ಷೆ ಬೇಡ.

### ಇಲಾಖೆ ವಾದವೇನು?

- ಸಾಮಾನ್ಯ ಪಠ್ಯಕ್ರಮದಿಂದಲೇ ಕಲಿಕಾ ಚೇತರಿಕೆ ಪಠ್ಯಸಿದ್ಧ.
- ಮಕ್ಕಳ ಬುದ್ಧಿಮತ್ತೆ ವೃದ್ಧಿಸುವ ನಿಟ್ಟಿನಲ್ಲಿ ಇದು ರೂಪಿಸಲಾಗಿದೆ
- ಪ್ರಶ್ನೆಪತ್ರಿಕೆಯಲ್ಲಿ ಪಠ್ಯಕ್ರಮದಿಂದ ಹೊರತಾದ ಪ್ರಶ್ನೆಗಳಿಲ್ಲ.
- ಬೋರ್ಡ್ ಪರೀಕ್ಷೆಗೆ ಕಲಿಕಾ ಚೇತರಿಕೆ ಪಠ್ಯದ ಆಯ್ಕೆ ಸರಿಯಿದೆ.

ನಾಗೇಶ್ ಹೆಗಡೆ, ಪಿ.ಲಂಕೇಶ್, ಉಡುಪ, ದೇವನೂರು ಮಹದೇವ ಪಠ್ಯ ಮರು ಸೇರ್ಪಡೆ

# ಪಠ್ಯ ಪರಿಷ್ಕರಣೆ; ಎಚ್ಚರಿಕೆಯ ಹೆಜ್ಜೆಯಿಟ್ಟ ಸರಕಾರ

**ಬೆಂಗಳೂರು:** ಬಿಜೆಪಿ ಸರಕಾರದ ಅವಧಿಯಲ್ಲಿನ ಪಠ್ಯ ಪರಿಷ್ಕರಣೆ ವಿರುದ್ಧ ಚುನಾವಣಾ ಪೂರ್ವದಿಂದ ಟೀಕಿಸುತ್ತಲೇ ಬಂದಿದ್ದ ಕಾಂಗ್ರೆಸ್ ಇದೀಗ, 2024-25ನೇ ಸಾಲಿಗೆ ಪರಿಷ್ಕೃತ ಪಟ್ಟಿಯನ್ನು ಬಿಡುಗಡೆಗೊಳಿಸಿದೆ. ಬಿಜೆಪಿ ಅವಧಿಯಲ್ಲಿ ಕೈಬಿಟ್ಟಿದ್ದ ಕೆಲ ಪಠ್ಯವನ್ನು ಮರು ಸೇರ್ಪಡೆಗೊಳಿಸಿರುವ ರಾಜ್ಯ ಸರಕಾರ, ವಿವಾದಿತ ಪಠ್ಯದ ವಿಷಯದಲ್ಲಿ ತಟಸ್ಥ ಧೋರಣೆ ತೋರಿದೆ.

- ವಿವಾದಿತ ಪಠ್ಯ ಸೇರ್ಪಡೆಗೆ ಮುಂದಾಗದ ಇಲಾಖೆ
- ಬಿಜೆಪಿ ಸರಕಾರದಲ್ಲಿ ತೆಗೆದಿದ್ದ ಕೆಲ ಪಠ್ಯಗಳನ್ನು ಮಾತ್ರ ಮರುಸೇರ್ಪಡೆ

ಚುನಾವಣಾ ಪ್ರಣಾಳಿಕೆಯಲ್ಲಿಯೂ ಪಠ್ಯ ಪರಿಷ್ಕರಣೆಗೆ ಸಂಬಂಧಿಸಿದಂತೆ ಪ್ರಸ್ತಾಪಿಸಿದ್ದ ಕಾಂಗ್ರೆಸ್, ಅದಕ್ಕಾಗಿ ಪ್ರತ್ಯೇಕ ಸಮಿತಿಯನ್ನು ರಚಿಸಿ ತ್ತು. ಇದೀಗ ಪರಿಷ್ಕೃತ ಪಠ್ಯವನ್ನು ಅಧಿಕೃತ ಆದೇಶದ ಮೂಲಕ ಅಂತಿಮಗೊಳಿಸಿದೆ. ಆದರೆ ಕಳೆದ ಬಾರಿ ಭಾರಿ ವಿವಾದಕ್ಕೆ ಕಾರಣವಾಗಿದ್ದ ಟಿಪ್ಪು ಪಠ್ಯವನ್ನು ಮರು ಸೇರ್ಪಡೆ ಮಾಡದೇ ಎಚ್ಚರಿಕೆಯ ಹೆಜ್ಜೆ ಇಟ್ಟಿದೆ.

ಡಾ.ಮಂಜುನಾಥ್ ಹೆಗಡೆ ನೇತೃತ್ವದ ಸಮಿತಿ ಪಠ್ಯ ಪುಸ್ತಕ ಪರಿಷ್ಕರಣೆ ಮಾಡಿದ ಶಾಲಾ ಶಿಕ್ಷಣ ಇಲಾಖೆ ಈ ಸಂಬಂಧ ಪತ್ರಿಕಾ ಪ್ರಕಟಣೆ ಹೊರಡಿಸಿದೆ. 2023-2024 ಸಾಲಿನಲ್ಲೂ ಹಲವು ತಿದ್ದುಪಡಿ ಮಾಡಿತ್ತು. ಇದರಂತೆ ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷದಲ್ಲೂ ರಾಷ್ಟ್ರೀಯ ಪಠ್ಯಕ್ರಮ ಚೌಕಟ್ಟು-2005ರ ಮಾರ್ಗಸೂಚಿಯಂತೆ ರಾಜ್ಯ ಪಠ್ಯಕ್ರಮದಲ್ಲಿ ಬದಲಾವಣೆ ಮಾಡಿದೆ ಎಂದು ಸ್ಪಷ್ಟಪಡಿಸಲಾಗಿದೆ.

ಒಂದರಿಂದ 10ನೇ ತರಗತಿವರೆಗಿನ ಕನ್ನಡ ಪ್ರಥಮ ಮತ್ತು ದ್ವಿತೀಯ ಭಾಷೆ ಹಾಗೂ 09 ಮತ್ತು 10ನೇ ತರಗತಿಯ ಕನ್ನಡ ತೃತೀಯ ಭಾಷೆಯ ಪಠ್ಯಪುಸ್ತಕಗಳು ಪರಿಷ್ಕರಣೆ ಮಾಡಲಾಗಿದೆ. ಇದರ ಜೊತೆಗೆ ಆರನೇ ಹಾಗೂ 10ನೇ ತರಗತಿಯ ಸಮಾಜ ವಿಜ್ಞಾನ ಪಠ್ಯಪುಸ್ತಕಗಳ ಪರಿಷ್ಕರಣೆ ಮಾಡಲಾಗಿದೆ.

### ಪರಿಷ್ಕೃತ ಪಠ್ಯದಲ್ಲಿನ ಪ್ರಮುಖಾಂಶ

- **6ನೇ ತರಗತಿ ಸಮಾಜ ವಿಜ್ಞಾನ:** ಪೌರ ಮತ್ತು ಪೌರತ್ವ ಪಾಠವನ್ನು ಲಿಂಗ ಸಮಾನತೆಯ ನೆಲೆಯಲ್ಲಿ ಪರಿಷ್ಕರಿಸಲಾಗಿದೆ.
- **7ನೇ ತರಗತಿ ಸಮಾಜ ವಿಜ್ಞಾನ:** ವಿಶ್ವಗುರು ಬಸವೇಶ್ವರರನ್ನು ಸಾಂಸ್ಕೃತಿಕ ನಾಯಕ ಎಂದು ದಾಖಲಿಸಿದೆ
- **8ನೇ ತರಗತಿ ಇತಿಹಾಸ:** ಸನಾತನ ಧರ್ಮ ಎಂಬ ಅಧ್ಯಾಯದಲ್ಲಿಕೆಲವು ಅಂಶಗಳನ್ನು ಸೇರಿಸಿ ವ್ಯವಸ್ಥಿತ ನಿರೂಪಣೆ.
- **9ನೇ ತರಗತಿ ಇತಿಹಾಸ:** ಭಕ್ತಿಪಂಥ ಅಧ್ಯಾಯದಲ್ಲಿ ಕನಕದಾಸರು, ಪುರಂದರದಾಸರು, ಸಂತ ಶಿಶುನಾಳ ಶರೀಫರ ಮಾಹಿತಿ ಸೇರ್ಪಡೆ
- **10ನೇ ತರಗತಿ ಇತಿಹಾಸ:** ಸಾರ್ವಜನಿಕ ಆಡಳಿತ ಎಂಬ ಹೊಸ ಅಧ್ಯಾಯ ಸೇರ್ಪಡೆ
- **1-5ನೇ ತರಗತಿ ಕನ್ನಡ:** ಕೆ.ವಿ.ತಿರುಮಲೇಶ್, ವಿ.ಜಿ.ಭಟ್ಟರ ಮಕ್ಕಳ ಕವನಗಳ ಸೇರ್ಪಡೆ
- ಕಂಬಾರ-ಸೀಮೆ, ಕಾರ್ನಾಡ್- ಅಧಿಕಾರ, ದೇವಿದಾಸ- ಚಕ್ರಗ್ರಹಣ, ಮರಿಯಪ್ಪ ಭಟ್ಟ- ನಮ್ಮ ಭಾಷೆ, ಎ.ಎನ್.ಮೂರ್ತಿರಾವ್- ವ್ಯಾಘ್ರ ಗೀತೆ, ದೇವನೂರು ಮಹಾದೇವ- ಎದೆಗೆ ಬಿದ್ದ ಅಕ್ಷರ, ಅಕ್ಕಮಹಾದೇವಿ- ವಚನಗಳು ಸೇರ್ಪಡೆಗೊಳಿಸಲಾಗಿದೆ.
- **9-10ನೇ ತರಗತಿ ಕನ್ನಡ:** ನಾಗೇಶ್ ಹೆಗಡೆ, ಪಿ.ಲಂಕೇಶ್, ಶ್ರೀನಿವಾಸ ಉಡುಪ ಅವರ ಕವನ ಹೊಸದಾಗಿ ಸೇರ್ಪಡೆ ಮಾಡಲಾಗಿದೆ.

ಪ್ರಚೋದನಾಕಾರಿ ಭಾಷಣದ ಆರೋಪ

# ಯತ್ನಾಳ, ಟಿ.ರಾಜಾಸಿಂಗ್ ವಿರುದ್ಧ ದೂರು ದಾಖಲು

**ವಿಜಯಪುರ:** ಶಿವಾಜಿ ಜಯಂತ್ಯುತ್ಸವದಲ್ಲಿ ಕೋಮು ಪ್ರಚೋದನಾಕಾರಿ ಭಾಷಣ ಮಾಡಿದ್ದಾರೆಂದು ಆರೋಪಿಸಿ ಹಿಂದೂಫೈರ್



ಬ್ರ್ಯಾಂಡ್ ಗಳೆಂದು ಗುರುತಿಸಿಕೊಂಡಿರುವ ಬಿಜೆಪಿಯ ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಹಾಗೂ ಹೈದರಾಬಾದ್ ಗೋಶಾಮಹಲ್ ಶಾಸಕ ಟಿ.ರಾಜಾಸಿಂಗ್ ವಿರುದ್ಧ ವಿಜಯಪುರದ ಗಾಂಧಿಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ನಗರದಲ್ಲಿ ಮಾ.4 ರಂದು ಜನತಾ ಸೇವಾ ಸಮಿತಿ ವತಿಯಿಂದ ಶಿವಾಜಿ ವೃತ್ತದಲ್ಲಿ ಆಯೋಜಿಸಲಾಗಿದ್ದ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಸಮಾರಂಭದಲ್ಲಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಗೋಶಮಹಲ್ ಕ್ಷೇತ್ರದ ಬಿಜೆಪಿ ಶಾಸಕ ಟಿ.ರಾಜಾಸಿಂಗ್ ಕೋಮುಸೌಹಾರ್ದತೆ ಕದಡಿಸುವಂತೆ ಒಂದು ಪ್ರತ್ಯೇಕ ಕೋಮಿನ ವಿರುದ್ಧ ಪ್ರಚೋದನಾಕಾರಿ ಭಾಷಣಗಳನ್ನು ಮಾಡಿದ್ದಾರೆಂದು ಆರೋಪಿಸಿ ನಗರದ ನಿವೃತ್ತ ಶಿಕ್ಷಕ ಅಬುಬಕರ್ ಕಂಬಾಗಿ ಎಂಬುವವರು ಇಬ್ಬರು ಶಾಸಕರ ವಿರುದ್ಧ ದೂರು ದಾಖಲಿಸಿದ್ದಾರೆ. ದೂರಿನನ್ವಯ ನಗರದ ಗಾಂಧಿಚೌಕ್ ಪೊಲೀಸ್ ಠಾಣೆಯಲ್ಲಿ ಇಬ್ಬರು ಶಾಸಕರುಗಳ ವಿರುದ್ಧ ಕಲಂ, 153, 506, 504, 505(2) ಐಪಿಸಿ ಅಡಿಯಲ್ಲಿ ಕೇಸ್ ದಾಖಲಾಗಿದೆ.

ಧ್ವನಿ ಹೋಲಿಕೆ ಬಗ್ಗೆ ಪರಿಶೀಲಿಸಬೇಕು

# ಈಗಲೂ ಎಫ್‌ಎಸ್‌ಎಲ್ ವರದಿಯನ್ನು ನೋಡಿಲ್ಲ

**ಗದಗ:** ಸರಕಾರ ಬಿಡುಗಡೆ ಮಾಡಿರುವ ವಿಧಿವಿಜ್ಞಾನ ಪ್ರಯೋಗಾ ಲಯ ವರದಿಯನ್ನು ನಾನು ನೋಡಿಯೇ ಇಲ್ಲ



ಎಂದು ಸಚಿವ ಪ್ರಿಯಾಂಕ್ ಖರ್ಗೆ ಜಾರಿಕೊಂಡಿದ್ದಾರೆ.

ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿರುವುದು ಸತ್ಯ ಇದು, ವಿಧಿವಿಜ್ಞಾನ ಪ್ರಯೋಗಾಲಯದ ವರದಿಯಲ್ಲಿ ದೃಢಪಟ್ಟಿದೆ ಎಂದು ಗೃಹಸಚಿವ ಪರಮೇಶ್ವರ್ ಅವರು ಮಂಗಳವಾರ ತಿಳಿಸಿದ್ದಾರೆ. ಈ ಕುರಿತು ಸುದ್ದಿಗಾರರೊಂದಿಗೆ ಮಾನತಾಡಿ, ಮೂವರನ್ನು ಬಂಧನ ಮಾಡಲಾಗಿದೆ, ಇಷ್ಟಕ್ಕೆ ಕೇಸ್ ಮುಗಿಯಲ್ಲ. ಇನ್ನೂ ಅವರ ಧ್ವನಿ ಹೋಲಿಕೆಯ ಬಗ್ಗೆ ಪರಿಶೀಲಿಸ ಬೇಕು. ಆ ಸಂದರ್ಭದಲ್ಲಿ ಅವರು ಅಲ್ಲಿದ್ರಾ, ಅನ್ನೋದನ್ನು ದೃಢಪಡಿಸಬೇಕು. ನಂತರ ಮುಂದಿನ ತನಿಖೆಯಾಗುತ್ತದೆ ಎಂದು ತಿಳಿಸಿದ್ದಾರೆ.

ನನಗೆ ಸಿಕ್ಕ ಫೂಟೇಜ್ ಅನ್ನು ಖಾಸಗಿ ಫೋರೆನ್ಸಿಕ್‌ನಲ್ಲಿ ಪರಿಶೀಲಿ ಸಿದ್ದೆವು. ನಾನು ಸರಕಾರದ ವರದಿ ಫೈನಲ್ ಅಂತ ಹೇಳಿದ್ದೆ. ಬಿಜೆಪಿಯವರು ಖಾಸಗಿ ವರದಿಯನ್ನು ಖಾಸಗಿ ವರದಿಯನ್ನು ಸರಕಾರಿ ವರದಿಯಾಗಿ ಬಿಂಬಿಸುವುದು ತಪ್ಪು. ಈಗಲೂ ನಾನು ಅದನ್ನೇ ಹೇಳುತ್ತೇನೆ ಸರಕಾರದ ವರದಿಯನ್ನು ನಾನು ನೋಡಿಯೇ ಇಲ್ಲ ಎಂದು ಪ್ರಿಯಾಂಕ್ ಖರ್ಗೆ ಅವರು ಹೇಳಿದರು.

ತನಿಖಾಧಿಕಾರಿಗಳಿಗೆ ಗಂಭೀರತೆ ಇಲ್ಲ

# ತನಿಖೆ ಬಳಿಕ ಹುಸೇನ್‌ಗೆ ಪ್ರಮಾಣವಚನ ಮಾಡಲಿ

**ಮಡಿಕೇರಿ:** ವಿಧಾನಸಭೆಯ ಆವರಣದಲ್ಲಿ ಪಾಕಿಸ್ತಾನದ ಪರ ಘೋಷಣೆ ಕೂಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಪೂರ್ಣ



ಗೊಳ್ಳದೆ ನಾಸಿರ್ ಹುಸೇನ್ ಅವರಿಗೆ ಪ್ರಮಾಣ ವಚನ ಬೋಧನೆ ಮಾಡಬಾರದು ಎಂದು ನಿವೃತ್ತ ಐಪಿಎಸ್ ಅಧಿಕಾರಿ ಭಾಸ್ಕರ್ ರಾವ್ ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯ ಸರಕಾರ ಪಾಕಿಸ್ತಾನ ಪರ ಘೋಷಣೆ ಕೂಗಿದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸದಿರುವುದು ಸರಿಯಲ್ಲ. ನಾಸಿರ್ ಹುಸೇನ್ ಅವರ ಬೆಂಬಲಿ ಗರು ದೇಶದ್ರೋಹದ ಘೋಷಣೆ ಕೂಗಿದ್ದಾರೆ. ಇಂತಹ ಘೋಷಣೆ ಕೂಗಿದವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳ ಬೇಕು. ಈ ವ್ಯಕ್ತಿಗಳನ್ನು ಪಕ್ಷದಿಂದ ಹೊರ ಹಾಕಬೇಕು. ತನಿಖೆ ಪೂರ್ಣಗೊಳ್ಳುವ ಮೊದಲು ನಾಸಿರ್ ಹುಸೇನ್‌ಗೆ ಪ್ರಮಾಣ ವಚನ ಬೋಧಿಸಬಾರದು ಎಂದು ಒತ್ತಾಯಿಸಿದರು.

ಸರಕಾರ ಪಿಎಫ್ಐ ಮೇಲಿನ ಕೇಸ್‌ಗಳನ್ನು ಹಿಂಪಡೆದ ಕಾರಣ ಶಾಸಕರಾಗಿದ್ದ ತನ್ವೀರ್ ಸೇಠ್‌ರ ಮೇಲೆ ದಾಳಿ ನಡೆಯಲು ಕಾರಣವಾಯಿತು. ಇಂತಹ ಪ್ರಕರಣಗಳು ನಡೆಯುತ್ತಿವೆ. ಘಾತುಕ ಶಕ್ತಿಗಳಿಗೆ ಬೆಂಬಲ ನೀಡಿದರೆ ಸಮಾಜಕ್ಕೆ ತಪ್ಪು ಸಂದೇಶ ರವಾನೆಯಾಗುತ್ತದೆ. ಎಫ್‌ಎಸ್‌ಎಲ್ ವರದಿಯನ್ನು ಮುಚ್ಚಿಡಲು ಸಾಧ್ಯವಿಲ್ಲ. ಪೊಲೀಸ್ ತನಿಖಾಧಿಕಾರಿಗಳಿಗೆ ಪ್ರಕರಣದ ಗಂಭೀರತೆಯೇ ಇಲ್ಲವಾಗಿದೆ ಎಂದು ಟೀಕಿಸಿದರು.

ಎರಡೂ ಮಕ್ಕಳು ಆರೋಗ್ಯ

# 6 ತಿಂಗಳಿಗೆ ಜನಿಸಿದ ಅವಳಿ ಹೆಣ್ಣು ಮಕ್ಕಳು

**ಚಿಕ್ಕೋಡಿ:** ಚಿಕ್ಕೋಡಿ ತಾಲೂಕಿನ ಯಕ್ಸಂಬಾದ ಮಹಿಳೆ ಆರೇ ತಿಂಗಳಿಗೆ ಅವಳಿ ಹೆಣ್ಣುಮಕ್ಕಳಿಗೆ ಜನ್ಮ ನೀಡಿದ್ದಾರೆ.



ಎರಡೂವರೆ ತಿಂಗಳು ಶಿಶುಗಳಿಗೆ ವೈದ್ಯರು ಚಿಕಿತ್ಸೆ ನೀಡಿ, ಬದುಕಿಸಿದ್ದಾರೆ.

ಬ್ಯಾಂಕ್ ಕ್ಲರ್ಕ್ ಸಿದ್ದಪ್ಪ ಸಾತ್ವಾರ ಅವರ ಪತ್ನಿ ಅನಿತಾ ಈ ಅವಳಿ ಮಕ್ಕಳನ್ನು ಹೆತ್ತವರು. 2023ರ ಡಿಸೆಂಬರ್ 26ರಂದು ಅವರು ಸಹಜ ಹೆರಿಗೆ ಮೂಲಕ ಅವಳಿ ಮಕ್ಕಳಿಗೆ ಜನ್ಮ ನೀಡಿದರು. ಚಿಕ್ಕೋಡಿಯ ದಿಯಾ ಆಸ್ಪತ್ರೆಯ ಪ್ರಸೂತಿ ತಜ್ಞೆ ಡಾ.ಸಂಧ್ಯಾ ಪಾಟೀಲ ಹೆರಿಗೆ ಮಾಡಿಸಿದ್ದಾರೆ.

ಹುಟ್ಟಿದಾಗ ಮೊದಲನೇ ಶಿಶು 830 ಗ್ರಾಂ, ಎರಡನೇ ಶಿಶು 890 ಗ್ರಾಂ ತೂಕ ಇದ್ದವು. ತೂಕ ಅತ್ಯಂತ ಕಡಿಮೆ ಇದ್ದ ಕಾರಣ ಚಿಕ್ಕೋಡಿಯ ದಿವ್ಯಂ ಮಕ್ಕಳ ಆಸ್ಪತ್ರೆಗೆ ದಾಖಲಿಸಲಾಯಿತು. ಮಕ್ಕಳತಜ್ಞ ಡಾ.ಅಮಿತ್ ಮಗದುಮ್ ಸೂಕ್ತ ಚಿಕಿತ್ಸೆ ನೀಡಿ ಎರಡೂ ಶಿಶುಗಳು ಆರೋಗ್ಯವಾಗಿ ಬರುವಂತೆ ಮಾಡಿದರು. ಸದ್ಯ ಮೊದಲ ಶಿಶು 1,600 ಗ್ರಾಂ ಹಾಗೂ ಎರಡನೇ ಶಿಶು 1,580 ಗ್ರಾಂ ತೂಕ ಹೊಂದಿದ್ದು, ಆರೋಗ್ಯದಲ್ಲಿ ಸ್ಥಿರತೆ ಇದೆ. ಒಂದು ವಾರದಲ್ಲಿ ಶಿಶುಗಳನ್ನು ಮನೆಗೆ ಕಳುಹಿಸಲಾಗುವುದು ಎಂದು ಡಾ.ಅಮಿತ್ ತಿಳಿಸಿದ್ದಾರೆ.